ಕರ್ನಾಟಕ ಸರ್ಕಾರ

# ಉನ್ನತ ಶಿಕ್ಷಣ ಇಲಾಖೆ

ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು

ಸಂಖ್ಯೆ: ಇಡಿ 496 ಯುಎನ್‌ಇ 2017 ದಿ:05.03.2018

## ಜಾಹೀರಾತು

### ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಯ ನೇಮಕಾತಿ

ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಅಧಿನಿಯಮ, 2009 ಪ್ರಕರಣ 12ರ ಉಪಬಂಧಗಳನುಸಾರ ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ನೇಮಕಾತಿ ಮಾಡಲು ಈ ಕೆಳಕಂಡ ಅರ್ಹತೆಯುಳ್ಳ ಪ್ರಾಧ್ಯಾಪಕರು / ಶಿಕ್ಷಣ ತಜ್ಞರುಗಳಿಂದ ಅರ್ಜಿಗಳನ್ನು ಹೊಸದಾಗಿ ಆಹ್ವಾನಿಸಲಾಗಿದೆ.

1. ಉನ್ನತ ಮಟ್ಟದ ಆಡಳಿತ, ಶೈಕ್ಷಣಿಕ ಹಾಗೂ ಸಂಶೋಧನಾ ಸಾಮರ್ಥ್ಯ, ಪ್ರಾಮಾಣಿಕತೆ, ಸಮಗ್ರತೆ/ಋಜುತ್ವ, ನೈತಿಕ ಮೌಲ್ಯಗಳನ್ನು ಹಾಗೂ ಸಾಂಸ್ಥಿಕ ಬದ್ಧತೆಯನ್ನು ಹೊಂದಿರತಕ್ಕದ್ದು.
2. ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಕನಿಷ್ಠ 10 ವರ್ಷಗಳ ಸೇವೆ ಸಲ್ಲಿಸಿದ ಅಥವಾ ತತ್ಸಮಾನವಾದ ಸ್ಥಾನಮಾನದಲ್ಲಿ ವಿಖ್ಯಾತ ಸಂಶೋಧನಾ ಮತ್ತು/ಅಥವಾ ಶೈಕ್ಷಣಿಕ ಆಡಳಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿದ ಅನುಭವವನ್ನು ಹೊಂದಿರತಕ್ಕದ್ದು.
3. ಸಂಗೀತ ಮತ್ತು ಪ್ರದರ್ಶಕ ಕಲೆಗಳ ಕ್ಷೇತ್ರದಲ್ಲಿ ಖ್ಯಾತ ಶಿಕ್ಷಣ ತಜ್ಞರಾಗಿರಬೇಕು.

2) ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಯ ನೇಮಕಾತಿಗೆ ಉಮೇದುವಾರಿಕೆ ಸಲ್ಲಿಸಬಯಸುವ ಆಸಕ್ತರು ತಮ್ಮ ವಿದ್ಯಾರ್ಹತೆ, ಸಂಶೋಧನೆ, ಶೈಕ್ಷಣಿಕ ಮತ್ತು ಆಡಳಿತಾತ್ಮಕ ಅನುಭವಗಳು, ಸಾಧನೆಗಳು ಹಾಗೂ ಇತರೆ ವಿವರಗಳನ್ನು ಯುಜಿಸಿಯಿಂದ ನಿಗದಿಪಡಿಸಲಾಗಿರುವ ನಮೂನೆಯಲ್ಲಿ ಭರ್ತಿ ಮಾಡಿ ಅರ್ಜಿಗಳನ್ನು ತ್ರಿಪ್ರತಿಗಳಲ್ಲಿ ಈ ನೇಮಕಾತಿ ಜಾಹೀರಾತು ಪ್ರಕಟಣೆಯಾದ 15 ದಿನಗಳೊಳಗಾಗಿ ಸ್ವೀಕೃತವಾಗುವಂತೆ "ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, ಗೇಟ್ ನಂ.2, ಬಹುಮಹಡಿಗಳ ಕಟ್ಟಡ, ಡಿ.ದೇವರಾಜ ಅರಸು ವೀಧಿ, ಬೆಂಗಳೂರು-560001, ಇವರಿಗೆ ಸಲ್ಲಿಸತಕ್ಕದ್ದು."

3) ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ನಮೂನೆ / ಪ್ರಪತ್ರವನ್ನು ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣದಲ್ಲಿ ಪಡೆಯಬಹುದು.

4) ನಿಗದಿತ ಗಡುವು/ಅವಧಿ ಮುಕ್ತಾಯವಾದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂಚೆ ಅಥವಾ ಇತರೆ ಸ್ವರೂಪದ ವಿಳಂಬಗಳಿಗೆ ಉನ್ನತ ಶಿಕ್ಷಣ ಇಲಾಖೆಯು ಜವಾಬ್ದಾರವಾಗುವುದಿಲ್ಲ.

5) ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ನೂತನ ಕುಲಪತಿ ಹುದ್ದೆಗೆ ಈ ಹಿಂದೆ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಅಭ್ಯರ್ಥಿಗಳು ಅರ್ಜಿಗಳನ್ನು ಹೊಸದಾಗಿ ಸಲ್ಲಿಸುವುದು.

6) ನೇಮಕಾತಿ ಪ್ರಕ್ರಿಯೆಯಲ್ಲಿ ವಾಮಮಾರ್ಗದ ಮೂಲಕ ಅನುಚಿತ ಪ್ರಭಾವ ಬೀರಲು ಪ್ರಯತ್ನಿಸುವ ವ್ಯಕ್ತಿಗಳ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು.

7) ಅರ್ಜಿದಾರರು ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಸಲ್ಲಿಸದಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಸಹಿ/- ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ

DIPR/DD/MYS/MCA/1321